SEVA BHARATHI
सेवा ही परमो धर्मः

ಸಂಪುಟ : 06
ಸಂಚಿಕೆ : 02

# ಸೇವಾಪಥ

ಸೇವಾಭಾರತಿ(ರಿ.), ಬೆಳ್ತಂಗಡಿ ತಾ॥ ಇದರ
(ರಾಜ್ಯ ಪ್ರಶಸ್ತಿ ಪುರಸ್ಕೃತ ಸೇವಾ ಸಂಸ್ಥೆ-2022)
ಮಾಸಿಕ e-ನ್ಯೂಸ್ ಲೆಟರ್ – ಫೆಬ್ರವರಿ 2025

ಪ್ರಧಾನ ಕಚೇರಿ : ಸೇವಾನಿಕೇತನ, ಕನ್ಯಾಡಿ-॥, ಧರ್ಮಸ್ಥಳ ಅಂಚೆ, ಬೆಳ್ತಂಗಡಿ ತಾಲೂಕು, ದ.ಕ. – 574 216

## ಬೆನ್ನುಹುರಿ ಅಪಘಾತಕ್ಕೊಳಗಾದ ದಿವ್ಯಾಂಗರಿಗಾಗಿ ವಸತಿಯುತ ಉಚಿತ ಆರೋಗ್ಯ ತಪಾಸಣೆ, ಜಾಗೃತಿ ಶಿಬಿರ ಹಾಗೂ ಗಾಲಿಕುರ್ಚಿ ಜಾಥಾ



30ನೇ ಶಿಬಿರ - ಶಿರಸಿ



29ನೇ ಶಿಬಿರ - ಮಡಿಕೇರಿ

## ಸಂಸದರಿಂದ ಸೇವಾನಿಕೇತನಕ್ಕೆ ಭೇಟಿ

## ನಾವಳೆಯಲ್ಲಿ ಸಂಪನ್ನಗೊಂಡ ಉಚಿತ ಟೈಲರಿಂಗ್ ತರಬೇತಿ ಶಿಬಿರ

## ಆಶಯ ಕಳೆದುಕೊಂಡವರ ಬಾಳು ಬೆಳಗಿದ ಐಟಿ ಕಂಪನಿ, ಅಂಚಿನಡ್ಕ ಆದಿತ್ಯಕಲ್ಲುರಾಯ ಅವರ ಜೀವನೋದ್ಯಮ

ಯಶೋಗಾಥೆ

## ನಮ್ಮಿಂದಿಷ್ಟು

ಎಲ್ಲರಿಗೂ ನಮಸ್ಕಾರಗಳು,

ಕಳೆದ ನವೆಂಬರ್‌ನಲ್ಲಿ ನಮ್ಮ ನೂತನ ಕಟ್ಟಡಕ್ಕಾಗಿ ನಡೆದ ಭೂಮಿಪೂಜೆ ಮತ್ತು ಶಿಲಾನ್ಯಾಸದ ಕಾರ್ಯಕ್ರಮಕ್ಕೆ ನಮ್ಮ ಲೋಕಸಭಾ ಕ್ಷೇತ್ರದ ಸಂಸದರಾದ ಕ್ಯಾಪ್ಟನ್ ಬ್ರಿಜೇಶ್ ಚೌಟರು ಭಾಗವಹಿಸಿರಲಿಲ್ಲ. ಅದೇ ಹೊತ್ತಿನಲ್ಲಿ ಕೇಂದ್ರಮಂತ್ರಿಯವರು ಧರ್ಮಸ್ಥಳಕ್ಕೆ ಭೇಟಿ ನೀಡಿದ್ದರು. ಆದ ಕಾರಣ ಜನವರಿ 8 ರಂದು ನಮ್ಮ ಕಚೇರಿ ಸೇವಾನಿಕೇತನಕ್ಕೆ ಭೇಟಿ ನೀಡಿದಾಗ ಬೆನ್ನುಹುರಿ ಅಪಘಾತದ ಮಾಹಿತಿ ಹಾಗೂ ದ್ವಿತಿಯಾಂತರ ಸಮಸ್ಯೆಗಳು, ಪುನಶ್ಚೇತನದ ಅಗತ್ಯತೆ ಬಗ್ಗೆ ಅವರ ಮನಮುಟ್ಟುವಂತೆ ತಿಳಿಸಿ ಸಹಕಾರಕ್ಕಾಗಿ ಮನವಿ ಸಲ್ಲಿಸಿದೆವು.

ಇನ್ನುಳಿದಂತೆ ಮಡಿಕೇರಿ ಮತ್ತು ಶಿರಸಿಯಲ್ಲಿ ನಡೆದ ಎರಡು ಶಿಬಿರಗಳು ನಮ್ಮ ಯೋಜನೆಯಂತೆ ಸಂಪನ್ನಗೊಂಡಿತು. ಗಾಲಿಕುರ್ಚಿ ಜಾಥಾ ಸಾರ್ವಜನಿಕರ ಮನಮುಟ್ಟುವಂತೆ ಮಾಡುವಲ್ಲಿ ಸಫಲವಾಯಿತು. ಭಾಗವಹಿಸಿದ ಶಿಬಿರಾರ್ಥಿಗಳಿಗೆ ಅವರವರ ಸಮಸ್ಯೆ ಅವರು ಅನುಭವಿಸುತ್ತಿರುವ ಇತರೆ ಗಾಯ ಮತ್ತು ಸಮಸ್ಯೆಗಳಿಗೆ ಪರಿಹಾರಕ್ಕಾಗಿ ವೈದ್ಯರ ತಂಡವೆ ಪ್ರಯತ್ನ ಪಟ್ಟಿದೆ.

2023–24ನೇ ವಾರ್ಷಿಕ ಸಮಾರಂಭವು ಮಾರ್ಚ್ ತಿಂಗಳಲ್ಲಿ ನಡೆಯಲಿದೆ ತಯಾರಿಗಳು ಈಗಾಗಲೇ ಪ್ರಾರಂಭಗೊಂಡಿದೆ.

ಇನ್ನುಳಿದಂತೆ ಸೇವಾಧಾಮದ ಕಟ್ಟಡದ ಅಡಿಪಾಯ ಕಾರ್ಯ ನಿಧಾನವಾಗಿ ಪ್ರಾರಂಭ–ಗೊಂಡಿದ್ದರೂ ವೇಗರೂಪ ಪಡೆದುಕೊಂಡಿದೆ. ಮಣ್ಣು ಮೃದು ಆಗಿರುವ ಕಾರಣ ನಮ್ಮ ಅಂದಾಜು ವೆಚ್ಚದಲ್ಲಿ ಏರಿಕೆ ಕಂಡಿದೆ. ಆದಕಾರಣ ಅದನ್ನು ಭರಿಸುವ ಯೋಜನೆ ಹಾಕಿಕೊಳ್ಳಲಾಗಿದೆ. ಸಹೃದಯಿಗಳು ಕೊಡುಗೈ ದಾನಿಗಳು ಕೈಜೋಡಿಸಬೇಕಿದೆ. ನಮ್ಮ ಪರಿಶ್ರಮವಿದೆ.

**ಸೇವಾ ಹಿ ಪರಮೋ ಧರ್ಮಃ**

ತಾಯಿ ಭಾರತೀಯ ಸ್ಮರಣೆಗಳೊಂದಿಗೆ,

ವಂದನೆಗಳು



ತಮ್ಮವ,

**ಕೆ. ವಿನಾಯಕ ರಾವ್**

## ನಮ್ಮ ವಿಳಾಸ

**ಪ್ರಧಾನ ಕಚೇರಿ :**

ಸೇವಾನಿಕೇತನ, ಕನ್ಯಾಡಿ–II
ಧರ್ಮಸ್ಥಳ ಗ್ರಾಮ, ಬೆಳ್ತಂಗಡಿ ತಾಲೂಕು – 574 216
ಮೊ.: 99454 91241

**ಸೇವಾ ಕೇಂದ್ರ :**

ಸೇವಾಧಾಮ
(ಬೆನ್ನುಹುರಿ ಅಪಘಾತಕ್ಕೊಳಗಾದವರಿಗಾಗಿ ಪುನಶ್ಚೇತನ ಕೇಂದ್ರ)
ಸೌತಡ್ಕ ಶ್ರೀ ಮಹಾಗಣಪತಿ ದೇವಸ್ಥಾನದ ಬಳಿ
ಕೊಕ್ಕಡ ಗ್ರಾಮ – 574 198
ಮೊ.: 94482 54888

## ನಮ್ಮ ತಂಡ

| | |
|---|---|
| ಶ್ರೀಮತಿ ಸ್ವರ್ಣಗೌರಿ | – ಅಧ್ಯಕ್ಷರು |
| ಶ್ರೀ ಕೆ. ಯು. ಗಿರೀಶ್ ರಾವ್ | – ಉಪಾಧ್ಯಕ್ಷರು |
| ಶ್ರೀ ಕೆ. ಬಾಲಕೃಷ್ಣ | – ಕಾರ್ಯದರ್ಶಿ |
| ಶ್ರೀ ಕೆ. ವಿನಾಯಕ ರಾವ್ | – ಖಜಾಂಚಿ |
| ಶ್ರೀ ಬಿ. ಕೃಷ್ಣಪ್ಪ ಗುಡಿಗಾರ್ | – ಟ್ರಸ್ಟಿ |
| ಶ್ರೀ ವಿಷ್ಣುಪ್ರಸಾದ್ ತೆಂಕಿಲ್ಲಾಯ | – ಟ್ರಸ್ಟಿ |

## ಸಲಹಾ ಮಂಡಳಿ

1. ಶ್ರೀ CA ಗುಜ್ಜಾಡಿ ಪ್ರಭಾಕರ ನರಸಿಂಹ ನಾಯಕ್
2. ಡಾ. ಎ. ಜಯಕುಮಾರ್ ಶೆಟ್ಟಿ
3. ಶ್ರೀಮತಿ ಮನೋರಮ ಭಟ್
4. ಶ್ರೀ ಉದಯ ಶಂಕರ್
5. ಶ್ರೀ ವಿಜಯ ಕೊಡವೂರು
6. ಶ್ರೀಮತಿ ಜೊಯ್ಸ್ ಫಿರೇರಾ
7. ಶ್ರೀ ನಾಗೇಂದ್ರ ಮಾಗಡಿ
8. ಶ್ರೀ ರಜತ್‌ರಾವ್, ಧರ್ಮಸ್ಥಳ
9. ಶ್ರೀ ಗಣೇಶ್ ಶೆಂಡ್ಯೆ
10. ಡಾ. ಮುರಳೀಧರ ನಾಯಕ್

## ಸಂಚಾಲಕರು

ಶ್ರೀ ಕೆ. ಪುರಂದರ ರಾವ್

# ಬೆನ್ನುಹುರಿ ಅಪಘಾತಕ್ಕೊಳಗಾದ ದಿವ್ಯಾಂಗರಿಗಾಗಿ 29ನೇ ವಸತಿಯುತ ಉಚಿತ ಆರೋಗ್ಯ ತಪಾಸಣೆ, ಜಾಗೃತಿ ಶಿಬಿರ ಹಾಗೂ ಗಾಲಿಕುರ್ಚಿ ಜಾಥಾ









**ಮಡಿಕೇರಿ (ಫೆ.14):** ಸೇವಾಧಾಮ – ಸೇವಾಭಾರತಿ ಕೊಡಗು ಜಿಲ್ಲೆ ಇದರ ಆಶ್ರಯದಲ್ಲಿ ಶ್ರೀ ಕಾವೇರಿ ಕೃಪಾ ವಿಶ್ವಕಲ್ಯಾಣ ಸೇವಾಸಮಿತಿ(ರಿ.), ಅಶ್ವಿನಿ ಆಸ್ಪತ್ರೆ ಮಡಿಕೇರಿ, ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಬೋಧಕ ಆಸ್ಪತ್ರೆ, ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಕೊಡಗು ಶಾಖೆ ಮತ್ತು ವಿಕಾಸ ಜನಸೇವಾ ಟ್ರಸ್ಟ್(ರಿ.), ಆಶ್ರಮ ಮಡಿಕೇರಿ ಇವರ ಸಹಕಾರದಲ್ಲಿ ಬೆನ್ನುಹುರಿ ಅಪಘಾತಕ್ಕೊಳಗಾದವರಿಗಾಗಿ ವಸತಿಯುತ 29ನೇ ಉಚಿತ ಆರೋಗ್ಯ ತಪಾಸಣೆ ಹಾಗೂ ಜಾಗೃತಿ ಶಿಬಿರ ಹಾಗೂ ಗಾಲಿಕುರ್ಚಿ ಜಾಥಾದ ಉದ್ಘಾಟನಾ ಸಮಾರಂಭವು ಫೆಬ್ರವರಿ 14 ರಂದು ಅಶ್ವಿನಿ ಆಸ್ಪತ್ರೆ, ಮಡಿಕೇರಿಯಲ್ಲಿ ನಡೆಯಿತು.

ಕಾರ್ಯಕ್ರಮವನ್ನು ಮಡಿಕೇರಿ ಅಶ್ವಿನಿ ಆಸ್ಪತ್ರೆಯ ಕಾರ್ಯದರ್ಶಿ ಕುಪ್ಪಂಡ ರಾಜಪ್ಪ ಉದ್ಘಾಟಿಸಿ ಸೇವಾಧಾಮ ಮಾಡುವ ಕಾರ್ಯಚಟುವಟಿಕೆಗಳನ್ನು ಶ್ಲಾಘಿಸಿ ಈಗಾಗಲೇ ಎರಡು ಬಾರಿ ಅಶ್ವಿನಿ ಆಸ್ಪತ್ರೆ ಉಚಿತವಾಗಿ ಶಿಬಿರವನ್ನು ನಡೆಸಿಕೊಡಲು ಸಂಪೂರ್ಣ ಸಹಕಾರವನ್ನು ನೀಡಿದ್ದು ಇನ್ನು ಮುಂದೆಯೂ ನಮ್ಮ ಆಸ್ಪತ್ರೆಯಿಂದ ನಿಮಗೆ ಸಂಪೂರ್ಣ ಸಹಕಾರವನ್ನು ನೀಡುತ್ತೇವೆ ಹಾಗೇ ಸೇವಾಭಾರತಿ ಸಂಸ್ಥೆಯು ಇನ್ನು ಹೆಚ್ಚಿನ ಸೇವಾಕಾರ್ಯಗಳನ್ನು ಮಾಡುವ ಯಶಸ್ಸು ನಿಮ್ಮದಾಗಲಿ ಎಂದು ಉದ್ಘಾಟಕರ ನುಡಿಗಳನ್ನಾಡಿದರು.

ಸಂಸ್ಥೆಯ ಸಂಸ್ಥಾಪಕರಾದ ಕೆ. ವಿನಾಯಕ ರಾವ್ ಪ್ರಾಸ್ತಾವಿಕ ನುಡಿಗಳನ್ನಾಡಿ ಮಡಿಕೇರಿಯಲ್ಲಿ ಶಿಬಿರವನ್ನು ನಡೆಸಲು ಅಶ್ವಿನಿ ಆಸ್ಪತ್ರೆ ಮತ್ತು ವಿಕಾಸ ಜನಸೇವಾ ಟ್ರಸ್ಟ್ (ರಿ.), ಕಳೆದ ವರ್ಷ ನಮಗೆ ಸಂಪೂರ್ಣ ಸಹಕಾರವನ್ನು ನೀಡಿದ್ದು, ಈ ವರ್ಷವೂ ನಮ್ಮ ಜೊತೆ ಕೈಜೋಡಿಸಿದ್ದಾರೆ. ಅದರ ಜೊತೆಗೆ ಈ ಬಾರಿ ಸ್ವಾಮಿ ವಿವೇಕಾನಂದ ಯೂತ್ ಮವೆಂಟ್‌ನವರು ಜೊತೆಗಿದ್ದು ಶಿಬಿರವನ್ನು ನಡೆಸಿಕೊಡಲು ಸಂಪೂರ್ಣ ಸಹಕಾರವನ್ನು ನೀಡಿ ನಮಗೆ ಬೆನ್ನೆಲುಬಾಗಿ ನಿಂತಿದ್ದಾರೆ ಎಂದು ಸಂತಸವನ್ನು ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಮಡಿಕೇರಿ ವಿಕಾಸ ಜನಸೇವಾ ಟ್ರಸ್ಟ್(ರಿ.), ಸದಸ್ಯರಾದ ಕೋಚನ ಎಂ. ಚೇತನ್, ಸ್ವಾಮಿ ವಿವೇಕಾನಂದ ಯೂತ್ ಮೂವೆಂಟ್‌ನ ಸಲಹಾ ಸಮಿತಿ ಸದಸ್ಯರಾದ ಅಜಯ್ ಸೂದ್, ವಿಕಾಸ ಜನಸೇವಾ ಟ್ರಸ್ಟ್ (ರಿ.), ಗೌರವಾಧ್ಯಕ್ಷರಾದ ಕಾರ್ಯಪ್ಪ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಮಡಿಕೇರಿ ಸ್ವಾಮಿ ವಿವೇಕಾನಂದ ಯೂತ್ ಮೂವೆಂಟ್ ಪ್ರೊಗ್ರಾಮ್ ಸ್ಪೆಷಲಿಸ್ಟ್ ಬೋರಯ್ಯ ಸ್ವಾಗತಿಸಿ, ಹಿರಿಯ ಪ್ರಬಂಧಕರಾದ ಚರಣ್ ಕುಮಾರ್ ಎಂ. ಕಾರ್ಯಕ್ರಮವನ್ನು ನಿರೂಪಿಸಿ, ದಕ್ಷಿಣಕನ್ನಡ ಮತ್ತು ಕೊಡಗು ಕ್ಷೇತ್ರ ಸಂಯೋಜಕರಾದ ಕುಸುಮಾಧರ್ ಧನ್ಯವಾದವಿತ್ತರು.

ಒಟ್ಟು 15 ಮಂದಿ ಶಿಬಿರಾರ್ಥಿಗಳು ಶಿಬಿರದಲ್ಲಿ ಪಾಲ್ಗೊಂಡಿದ್ದರು.

*Abled does not mean enabled. Disabled does not mean less abled*

## ಶಿರಸಿಯಲ್ಲಿ ಗಾಲಿಕುರ್ಚಿ ಜಾಥಾ






**ಶಿರಸಿ (ಫೆ.24):** ಸೇವಾಧಾಮ – ಸೇವಾಭಾರತಿ ಉತ್ತರಕನ್ನಡ ಜಿಲ್ಲೆ ಇದರ ಆಶ್ರಯದಲ್ಲಿ ಶಿರಸಿ ಸ್ಕ್ಯಾನಿಂಗ್ ಸೆಂಟರ್, ರೋಟರಿ ಕ್ಲಬ್ ಶಿರಸಿ ಹಾಗೂ ಇಂಡಿಯನ್ ಮೆಡಿಕಲ್ ಸೋಸಿಯೇಷನ್ ಶಿರಸಿ ಇವರ ಸಹಕಾರದಲ್ಲಿ ಬೆನ್ನುಹುರಿ ಅಪಘಾತಕ್ಕೊಳಗಾದವರಿಗಾಗಿ ವಸತಿಯುತ 30ನೇ ಉಚಿತ ಆರೋಗ್ಯ ತಪಾಸಣೆ ಹಾಗೂ ಜಾಗೃತಿ ಶಿಬಿರದಲ್ಲಿ ಗಾಲಿಕುರ್ಚಿ ಜಾಥಾವನ್ನು ಹಮ್ಮಿಕೊಳ್ಳಲಾಗಿತ್ತು.

ಜನಸಾಮಾನ್ಯರಿಗೆ ಬೆನ್ನುಹುರಿ ಅಪಘಾತದ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಹಾಗೇ ಬೆನ್ನುಹುರಿ ಅಪಘಾತಕ್ಕೊಳಗಾದ ದಿವ್ಯಾಂಗರನ್ನು ಮುಖ್ಯವಾಹಿನಿಗೆ ಕರೆತರುವ ಉದ್ದೇಶದಿಂದ ಫೆಬ್ರವರಿ 24 ರಂದು ಜಾಥಾವನ್ನು ನಡೆಸಲಾಯಿತು. ಶಿರಸಿ ಪೊಲೀಸ್ ಇನ್ಸ್‌ಪೆಕ್ಟರ್ ಶ್ರೀ ನಾಗಪ್ಪ ಹಸಿರು ನಿಷಾನೆಯನ್ನು ತೋರಿಸಿ ಜಾಥಾಕ್ಕೆ ಚಾಲನೆಯನ್ನು ನೀಡಿದರು.

ಮಾರಿಕಾಂಬ ದೇವಸ್ಥಾನದಿಂದ ಜಾಥಾವನ್ನು ಪ್ರಾರಂಭಿಸಿ ಹಳೆ ಬಸ್‌ಸ್ಟ್ಯಾಂಡ್ ಶಿರಸಿ ಮುಖಾಂತರ ಸಿಪಿ ಬಜಾರ್ ರೋಡಿನಿಂದ ಸರ್ಕಾರ್ ಹೋಟೆಲ್ ಮಾರ್ಗವಾಗಿ ದೇವಿಕೆರೆಯಿಂದ ಸಾಗಿ ಶಿರಸಿ ಸ್ಕ್ಯಾನಿಂಗ್ ಸೆಂಟರ್ ತನಕ ನಡೆಸಲಾಯಿತು.

ಈ ಸಂದರ್ಭದಲ್ಲಿ ಒಟ್ಟು 13 ಮಂದಿ ಬೆನ್ನುಹುರಿ ಅಪಘಾತಕ್ಕೊಳಗಾದ ದಿವ್ಯಾಂಗರು ಮತ್ತು ಆರೈಕೆದಾರರು, ಶಿರಸಿ ರೋಟರಿ ಕ್ಲಬ್ ಅಧ್ಯಕ್ಷರಾದ ರೊ। ಡಾ. ಸುಮನ್ ಹೆಗಡೆ, ಶಿರಸಿ ಸ್ಕ್ಯಾನಿಂಗ್ ಸೆಂಟರ್ ನಿರ್ದೇಶಕರು ರೊ। ಡಾ. ದಿನೇಶ್ ಹೆಗಡೆ, ಶಿರಸಿ ರೋಟರಿ ಕ್ಲಬ್ ಇವೆಂಟ್ ಛೇರ್‌ಮೇನ್ ರೋ। ಮಹೇಶ್ ತೆಲಂಗ, ಶಿರಸಿ ರೋಟರಿ ಕ್ಲ್ಬ್ ಕಾರ್ಯದರ್ಶಿ ರೊ। ಸರಸ್ವತಿ ಎನ್. ರವಿ ಹಾಗೂ ರೋಟರಿ ಕ್ಲಬ್‌ನ ಇನ್ನಿತರ ಸದಸ್ಯರು, ಶಿರಸಿ ರೋಟರಿ ಕ್ಲಬ್ ಖಜಾಂಚಿ ರೋ। ವಿನಾಯಕ ಜೋಶಿ, ಸ್ಕ್ಯಾನಿಂಗ್ ಸೆಂಟರ್‌ನ ಶ್ರೀ ಮಣಿಕಂಠ, ಸೇವಾಧಾಮ ಸಂಸ್ಥಾಪಕರಾದ ಶ್ರೀ ಕೆ. ವಿನಾಯಕ ರಾವ್, ಸೇವಾಭಾರತಿ ಸಿಬ್ಬಂದಿ ವರ್ಗದವರು, ಹಾಗೂ ವಿದ್ಯಾರ್ಥಿಗಳು ಸೇರಿದಂತೆ 1000 ಮಂದಿ ಜಾಥದಲ್ಲಿ ಭಾಗವಹಿಸಿದ್ದರು.

## ಮಡಿಕೇರಿಯಲ್ಲಿ ಗಾಲಿಕುರ್ಚಿ ಜಾಥಾ






**ಮಡಿಕೇರಿ (ಫೆ.15):** ಸೇವಾಧಾಮ – ಸೇವಾಭಾರತಿ ಕೊಡಗು ಜಿಲ್ಲೆ ಇದರ ಆಶ್ರಯದಲ್ಲಿ ಶ್ರೀ ಕಾವೇರಿ ಕೃಪಾ ವಿಶ್ವಕಲ್ಯಾಣ ಸೇವಾ ಸಮಿತಿ(ರಿ.), ಅಶ್ವಿನಿ ಆಸ್ಪತ್ರೆ ಮಡಿಕೇರಿ, ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಬೋಧಕ ಆಸ್ಪತ್ರೆ, ಸ್ವಾಮಿ ವಿವೇಕಾನಂದ ಯೂತ್ ಮೂವೆಂಟ್ ಕೊಡಗು ಶಾಖೆ ಮತ್ತು ವಿಕಾಸ ಜನಸೇವಾ ಟ್ರಸ್ಟ್(ರಿ.), ಆಶ್ರಮ ಮಡಿಕೇರಿ ಇವರ ಸಹಕಾರದಲ್ಲಿ ಬೆನ್ನುಹುರಿ ಅಪಘಾತಕ್ಕೊಳಗಾದವರಿಗಾಗಿ ವಸತಿಯುತ 29ನೇ ಉಚಿತ ಆರೋಗ್ಯ ತಪಾಸಣೆ ಹಾಗೂ ಜಾಗೃತಿ ಶಿಬಿರದಲ್ಲಿ ಗಾಲಿಕುರ್ಚಿ ಜಾಥಾವನ್ನು ಹಮ್ಮಿಕೊಳ್ಳಲಾಗಿತ್ತು.

ಜನಸಾಮಾನ್ಯರಿಗೆ ಬೆನ್ನುಹುರಿ ಅಪಘಾತದ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಹಾಗೇ ಬೆನ್ನುಹುರಿ ಅಪಘಾತಕ್ಕೊಳಗಾದ ದಿವ್ಯಾಂಗರನ್ನು ಮುಖ್ಯವಾಹಿನಿಗೆ ಕರೆತರುವ ಉದ್ದೇಶದಿಂದ ಫೆಬ್ರವರಿ 15 ರಂದು ಜಾಥಾವನ್ನು ನಡೆಸಲಾಯಿತು. ಕೊಡಗು ಪೊಲೀಸ್ ಇನ್ಸ್‌ಪೆಕ್ಟರ್ ತಿಮ್ಮಯ್ಯ ಎನ್.ಟಿ. ಹಸಿರು ನಿಷಾನೆಯನ್ನು ತೋರಿಸಿ ಜಾಥಾಕ್ಕೆ ಚಾಲನೆಯನ್ನು ನೀಡಿ ಗಾಲಿಕುರ್ಚಿ ರ್‍ಯಾಲಿಯನ್ನು ರಾಜಸೀಟಿನಿಂದ ಪ್ರಾರಂಭಿಸಿ ದೇವಯ್ಯ ಸರ್ಕಲ್ ಮುಖಾಂತರ ಜನರಲ್ ಎಸ್ ತಿಮ್ಮಯ್ಯ ವೃತ್ತದಿಂದ ಸಾಗಿ ಅಶ್ವಿನಿ ಆಸ್ಪತ್ರೆಯ ತನಕ ನಡೆಸಲಾಯಿತು.

ಈ ಸಂದರ್ಭದಲ್ಲಿ ಒಟ್ಟು 12 ಮಂದಿ ಬೆನ್ನುಹುರಿ ಅಪಘಾತಕ್ಕೊಳಗಾದ ದಿವ್ಯಾಂಗರು ಮತ್ತು ಅರೈಕೆದಾರರು, ಅಶ್ವಿನಿ ಆಸ್ಪತ್ರೆ ಮ್ಯಾನೇಜರ್ ರವೀಂದ್ರ, ಸ್ವಾಮಿ ವಿವೇಕಾನಂದ ಯೂತ್ ಮೂವೆಂಟ್ ಪ್ರೋಗ್ರಾಮ್ ಸ್ಪೆಷಲಿಸ್ಟ್ ಬೋರಯ್ಯ, ಅಸಿಸ್ಟೆಂಟ್ ಪಿ. ವಿಶ್ವನಾಥ್ ಹಾಗೂ ಎಂ.ಬಿ. ಶಿವರಾಮ್, ಸೇವಾಧಾಮ ಸಂಸ್ಥಾಪಕರಾದ ಕೆ.ವಿನಾಯಕ ರಾವ್, ಸೇವಾಭಾರತಿ ಕಾರ್ಯದರ್ಶಿ ಬಾಲಕೃಷ್ಣ ನೈಮಿಷ, ಸ್ವಯಂಸೇವಕರಾದ ಚಂದನ್ ಗುಡಿಗಾರ್, ಸೇವಾಭಾರತಿ ಸಿಬ್ಬಂದಿ ವರ್ಗದವರು, ಹಾಗೂ ವಿದ್ಯಾರ್ಥಿಗಳು ಸೇರಿದಂತೆ 800 ಮಂದಿ ಜಾಥದಲ್ಲಿ ಭಾಗವಹಿಸಿದ್ದರು.

*I dont need easy, I just need possible*

## ಸೇವಾನಿಧಿ ದಾನಿಗಳು

ಶ್ರೀ ರಾಜೇಶ್ ಫಡ್ಕೆ, ಬೆಂಗಳೂರು
ಶ್ರೀ ಬಾಲಸುಬ್ರಹ್ಮಣ್ಯ, ಬೆಂಗಳೂರು
ಶ್ರೀ ರಾಜಾರಾಮ್ ಕಾರಂತ್, ಬೆಂಗಳೂರು
ಶ್ರೀ ವಿ ಎಸ್ ಕಾಲಚಾರಿ, ಬೆಂಗಳೂರು
ಶ್ರೀ ಗಣೇಶ್ ಭಟ್, ಉಜಿರೆ
ಶ್ರೀ ಕೆ ಪುರಂದರ ರಾವ್, ಧರ್ಮಸ್ಥಳ
ಶ್ರೀಮತಿ ಸ್ವರ್ಣಗೌರಿ, ಧರ್ಮಸ್ಥಳ
ಶ್ರೀ ಜಯಾನಂದ ಎಂ, ಕನ್ಯಾಡಿ
ಶ್ರೀ ರಜತ್ ಕುಮಾರ್ ಜಿ ಡಿ, ಬೆಳ್ತಂಗಡಿ
ಶ್ರೀ ಬಿ ಪುರಂದರ, ನಾರ್ಯಾ
ಶ್ರೀ ಶೆಲ್ಡನ್ ಎಲ್ ಮೋನಿಸ್, ಬೆಳ್ತಂಗಡಿ
ಹೋಟೆಲ್ ಬಾಂಬೆ ಡೈನ್, ಉಜಿರೆ
ಶ್ರೀ ಕಾರ್ತಿಕ್ ಕೆ, ಧರ್ಮಸ್ಥಳ
ಮಾಸ್ಟರ್ ರಾಹುಲ್ ಪ್ರಭು, ಕನ್ಯಾಡಿ
ಶ್ರೀಮತಿ ಬಬಿತಾ, ಕನ್ಯಾಡಿ
ಶ್ರೀಮತಿ ಜಯಂತಿ ಪುರಂದರ ರಾವ್, ಧರ್ಮಸ್ಥಳ

## ಮಹನೀಯ ದಾನಿಗಳು

ಶ್ರೀಮತಿ ಲಕ್ಷ್ಮೀ, ಬೆಂಗಳೂರು
ಶ್ರೀ ವೆಂಕಟೇಶ ಬೆಂಡೆ, ಬೆಳ್ತಂಗಡಿ
ಶ್ರೀ ರಘು, ಮಡಿಕೇರಿ
ಶ್ರೀ ಪ್ರಕಾಶ್ ಗಡಿಯಾರ, ಉಡುಪಿ
ಶ್ರೀಮತಿ ನಿಶಾ ಕುಮಾರಿ ಕೆ, ಉಜಿರೆ
ಶ್ರೀಮತಿ ವಿಜಯಾ ಪಿ, ಪುತ್ತೂರು
ಶ್ರೀ ಕೃಷ್ಣ ಕೆ, ಕಾರ್ಕಳ
ಕುಮಾರಿ ಭವ್ಯಶ್ರೀ, ಕೊಡಗು
ಡಿ ವಸಂತ ಪೂಜಾರಿ, ಪುದುವೆಟ್ಟು
ಕುಮಾರಿ ವೇದಿಕಾ ಸಂದೇಶ ನಾಯ್ಕ, ಶಿರಸಿ
ಕುಮಾರಿ ಸ್ಫೂರ್ತಿ ಜಿ ಆರ್, ಶಿರಸಿ
ಕುಮಾರಿ ಸೋನಿಯಾ, ಶಿರಸಿ
ಶ್ರೀ ಭಾಸ್ಕರ್ ಶೆಟ್ಟಿ, ಶಿರಸಿ
ಶ್ರೀ ಡಿ ಸುಬ್ರಹ್ಮಣ್ಯಂ, ಶಿರಸಿ
ಶ್ರೀ ವಿನಾಯಕ ಜೋಶಿ, ಶಿರಸಿ
ಶ್ರೀ ಕೃಷ್ಣ & ಟೀಮ್, ಶಿರಸಿ
ಶ್ರೀ ಸಂದೇಶ ಶೆಟ್ಟಿ, ಶಿರಸಿ
ಶ್ರೀಮತಿ ಚೈತನ್ಯ ಡಿ ಎಂ, ಬೆಂಗಳೂರು
ಶ್ರೀ ಕೃಷ್ಣ ಮಂಜುನಾಥ್ ಪೂಜಾರಿ, ಶಿರಸಿ
ಶ್ರೀ ನಾರಾಯಣ ರಾಮಕೃಷ್ಣ ಕೋಮರ್, ಶಿರಸಿ
ಶ್ರೀ ಬಾಲಚಂದ್ರ, ಶಿರಸಿ
ಶ್ರೀ ಶೇಷಾದ್ರಿ, ಬೆಂಗಳೂರು
ಶ್ರೀ ಗಣಪತಿ ಜೋಗ್ಳೇಖರ್, ಶಿರಸಿ

## ದೇಣಿಗೆ ನೀಡಿದ ಸಂಘ ಸಂಸ್ಥೆಗಳು

TAPCMS Ltd, ಶಿರಸಿ

## ವಸ್ತು ರೂಪದಲ್ಲಿ ದೇಣಿಗೆ ನೀಡಿದವರು

ಉಜಿರೆ ಹವ್ಯಕ ವಲಯ, ಉಜಿರೆ

# ಸಂಸದರಿಂದ ಸೇವಾನಿಕೇತನಕ್ಕೆ ಭೇಟಿ



**ಕನ್ಯಾಡಿ (ಫೆ.08):** ದಕ್ಷಿಣಕನ್ನಡ ಜಿಲ್ಲೆಯ ಲೋಕಸಭಾ ಸದಸ್ಯರಾಗಿರುವ ಶ್ರೀ ಕ್ಯಾಪ್ಟನ್ ಬ್ರಿಜೇಶ್ ಚೌಟ ತಂಡವು ಕನ್ಯಾಡಿಯ ಸೇವಾನಿಕೇತನಕ್ಕೆ ಫೆಬ್ರವರಿ 8 ರಂದು ಭೇಟಿ ನೀಡಿದರು. ಸೇವಾಭಾರತಿ ಸಂಸ್ಥೆಯ ಸಂಸ್ಥಾಪಕರಾದ ಶ್ರೀ ಕೆ. ವಿನಾಯಕ ರಾವ್ ಸಂಸ್ಥೆಯ ಬಗ್ಗೆ ಮಾತನಾಡಿ, ಬೆನ್ನುಹುರಿ ಅಪಘಾತಕ್ಕೊಳಗಾದ ದಿವ್ಯಾಂಗರ ಪುನಶ್ಚೇತನ ಕೇಂದ್ರದ ನೂತನ ಕಟ್ಟಡ ನಿರ್ಮಾಣಕ್ಕೆ ಧನಸಹಾಯ ಮಾಡುವಂತೆ ಮನವಿ ಸಲ್ಲಿಸಲಾಯಿತು. ಮನವಿ ಹಸ್ತಾಂತರವನ್ನು ಸ್ವೀಕರಿಸಿ ಕಟ್ಟಡದ ನಿರ್ಮಾಣ ಶೀಘ್ರ ನೆರವೇರುವಂತೆ ಶುಭಹಾರೈಸಿದರು.

ಈ ಸಂದರ್ಭದಲ್ಲಿ ಸೇವಾಧಾಮ ಸಂಚಾಲಕರಾದ ಶ್ರೀ ಕೆ. ಪುರಂದರ ರಾವ್, ಸೇವಾಭಾರತಿ ಟ್ರಸ್ಟಿ ಶ್ರೀ ಬಿ. ಕೃಷ್ಣಪ್ಪ ಗುಡಿಗಾರ್, ಸೇವಾಭಾರತಿ ಕಾರ್ಯದರ್ಶಿ ಶ್ರೀ ಬಾಲಕೃಷ್ಣ ನೈಮಿಷ, ಭಾರತೀಯ ಮಜ್ದೂರ್ ಸಂಘದ ರಾಜ್ಯ ಕಾರ್ಯದರ್ಶಿ ಶ್ರೀ ಜಯರಾಜ್ ಸಾಲ್ಯಾನ್, ಸಂಸ್ಥೆಯ ಸ್ವಯಂಸೇವಕರಾದ ಶ್ರೀ ಚಂದನ್ ಗುಡಿಗಾರ್, ಶ್ರೀ ಜಯರಾಜ್ ಹಾಗೂ ಸಿಬ್ಬಂದಿವರ್ಗದವರು ಉಪಸ್ಥಿತರಿದ್ದರು.

# ಸೇವಾಧಾಮಕ್ಕೆ ಧನಸಹಾಯ



**ಶಿರಸಿ (ಫೆ .22):** ಶಿರಸಿ ತಾಲೂಕಿನ ಶ್ರೀ ನಾರಾಯಣ ಆರ್ ಕೋಮಾರ್ ಅವರು ಶಿರಸಿಯಲ್ಲಿ ಬೆನ್ನುಹುರಿ ಅಪಘಾತಕ್ಕೊಳಗಾದ ದಿವ್ಯಾಂಗರಿಗಾಗಿ ನಡೆಯುತ್ತಿರುವ ವಸತಿಯುತ 30ನೇ ಉಚಿತ ಆರೋಗ್ಯ ತಪಾಸಣೆ ಜಾಗೃತಿ ಶಿಬಿರ ಹಾಗೂ ಗಾಲಿಕುರ್ಚಿ ಜಾಥದ ಸಂದರ್ಭದಲ್ಲಿ ಸೇವಾಧಾಮ ಮಾಡುವ ಕಾರ್ಯಚಟುವಟಿಕೆಗಳಿಗೆ ರೂ. 51,000/– ದ ಚೆಕ್ ನೀಡಿ ಶುಭಹಾರೈಸಿದರು. ಸೇವಾಭಾರತಿ ಸಂಸ್ಥೆಯ ಸಂಸ್ಥಾಪಕರಾದ ಶ್ರೀ ಕೆ. ವಿನಾಯಕ ರಾವ್ ಅದನ್ನು ಸ್ವೀಕರಿಸಿ ಸಂಸ್ಥೆಯ ಪರವಾಗಿ ಧನ್ಯವಾದವಿತ್ತರು. ಈ ಸಂದರ್ಭದಲ್ಲಿ ಶಿರಸಿ ರೋಟರಿ ಕ್ಲಬ್ ಅಧ್ಯಕ್ಷರಾದ ರೊ। ಡಾ. ಸುಮನ್ ಹೆಗಡೆ, ಶಿರಸಿ ರೋಟರಿ ಕ್ಲಬ್ ಇವೆಂಟ್ ಛೇರ್‌ಮ್ಯಾನ್ ರೊ। ಮಹೇಶ್ ತೆಲಂಗ ಉಪಸ್ಥಿತರಿದ್ದರು.

*The world worries about disability more than disabled people do*

# ಬೆನ್ನುಹುರಿ ಅಪಘಾತಕ್ಕೊಳಗಾದ ದಿವ್ಯಾಂಗರಿಗಾಗಿ 30ನೇ ವಸತಿಯುತ ಉಚಿತ ಆರೋಗ್ಯ ತಪಾಸಣೆ, ಜಾಗೃತಿ ಶಿಬಿರ ಹಾಗೂ ಗಾಲಿಕುರ್ಚಿ ಜಾಥಾ










**ಶಿರಸಿ(ಫೆ.22):** ಸೇವಾಧಾಮ – ಸೇವಾಭಾರತಿ ಉತ್ತರಕನ್ನಡ ಜಿಲ್ಲೆ ಇದರ ಆಶ್ರಯದಲ್ಲಿ ಶಿರಸಿ ಸ್ಕ್ಯಾನಿಂಗ್ ಸೆಂಟರ್, ರೋಟರಿ ಕ್ಲಬ್ ಶಿರಸಿ ಹಾಗೂ ಇಂಡಿಯನ್ ಮೆಡಿಕಲ್ ಅಸೋಸಿಯೇಷನ್ ಶಿರಸಿ ಇವರ ಸಹಕಾರದಲ್ಲಿ ಬೆನ್ನುಹುರಿ ಅಪಘಾತಕ್ಕೊಳಗಾದವರಿಗಾಗಿ ವಸತಿಯುತ 30ನೇ ಉಚಿತ ಆರೋಗ್ಯ ತಪಾಸಣೆ, ಜಾಗೃತಿ ಶಿಬಿರ ಹಾಗೂ ಗಾಲಿಕುರ್ಚಿ ಜಾಥಾದ ಉದ್ಘಾಟನಾ ಸಮಾರಂಭವು ಫೆಬ್ರವರಿ 22 ರಂದು ಶಿರಸಿ ಸ್ಕ್ಯಾನಿಂಗ್, ಡೈಗ್ನೋಸ್ಟಿಕ್ ಮತ್ತು ರಿಸರ್ಚ್ ಸೆಂಟರ್‌ನಲ್ಲಿ ನಡೆಯಿತು.

ಕಾರ್ಯಕ್ರಮವನ್ನು ಶಿರಸಿ ಮತ್ತು ಸಿದ್ದಾಪುರ ಮಾನ್ಯ ಶಾಸಕರಾದ ಶ್ರೀ ಭೀಮಣ್ಣ ಟಿ. ನಾಯ್ಕ್ ಉದ್ಘಾಟಿಸಿ ಸೇವಾಧಾಮ ಮಾಡುವ ಕಾರ್ಯಚಟುವಟಿಕೆಗಳನ್ನು ಶ್ಲಾಘಿಸಿ ತನ್ನ ಕ್ಷೇತ್ರದಲ್ಲಿ ಬೆನ್ನುಹುರಿ ಅಪಘಾತಕ್ಕೊಳಗಾದ ದಿವ್ಯಾಂಗರ ಶಿಬಿರವು ಇಂದು ನಡೆಯುತ್ತಿದ್ದು ದಿವ್ಯಾಂಗರಿಗೆ ಸರಕಾರದಿಂದ ಸಿಗಬೇಕಾದ ಸೌಲಭ್ಯವನ್ನು ನೀಡುವಂತೆ ನನ್ನ ಕಡೆಯಿಂದ ಸಂಪೂರ್ಣ ಸಹಕಾರ ಮತ್ತು ಜೊತೆಯಿದ್ದು ಎಲ್ಲಾ ಕೆಲಸವನ್ನು ಮಾಡಿಕೊಡುತ್ತೇನೆ ಮತ್ತು ಅರ್ಹ ಫಲಾನುಭವಿಗಳಿಗೆ ನಿಯೋಬೋಲ್ಟ್ ಮತ್ತು ಪ್ರತಿಯೊಬ್ಬರಿಗೂ ಗಾಲಿಕುರ್ಚಿಯನ್ನು ನೀಡುತ್ತೇನೆ ಎಂಬ ಭರವಸೆಯನ್ನು ನೀಡಿ ಉದ್ಘಾಟಕರ ನುಡಿಗಳನ್ನಾಡಿದರು.

ಸಂಸ್ಥೆಯ ಸಂಸ್ಥಾಪಕರಾದ ಶ್ರೀ ಕೆ. ವಿನಾಯಕ ರಾವ್ ವಾಸ್ತಾವಿಕ ನುಡಿಗಳನ್ನಾಡಿ ಉಚಿತವಾಗಿ ಮೂರನೇ ಬಾರಿ ಶಿಬಿರವನ್ನು ಆಯೋಜನೆ ಮಾಡಲು ಅನುವು ಮಾಡಿಕೊಟ್ಟ ಶಿರಸಿ ಸ್ಕ್ಯಾನಿಂಗ್, ಡೈಗ್ನೋಸ್ಟಿಕ್ ಮತ್ತು ರೀಸರ್ಚ್ ಸೆಂಟರ್‌ಗೆ ಧನ್ಯವಾದಗಳನ್ನು ವ್ಯಕ್ತಪಡಿಸಿ, ಮಾನ್ಯ ಶಾಸಕರಲ್ಲಿ ಬೆನ್ನುಹುರಿ ಅಪಘಾತಕ್ಕೊಳಗಾದ ದಿವ್ಯಾಂಗರಿಗೆ ಮಾಸಾಶನ ರೂ. 5,000/– ಕ್ಕೆ ಹೆಚ್ಚಿಸುವಂತೆ ಮತ್ತು ಆರೈಕೆದಾರರಿಗೆ ಭತ್ಯೆ ನೀಡುವ ಹಾಗೆ ಆಯಾ ಇಲಾಖೆಗಳಿಗೆ ಶಿಫಾರಸ್ಸು ಮಾಡಬೇಕೆಂದು ಮನವಿಯನ್ನು ಹಸ್ತಾಂತರಿಸಿ ದಿವ್ಯಾಂಗರಿಗೆ ಶುಭಹಾರೈಸಿದರು.

ಈ ಸಂದರ್ಭದಲ್ಲಿ ಶಿರಸಿ ರೋಟರಿ ಕ್ಲಬ್ ಅಧ್ಯಕ್ಷರಾದ ರೊ। ಡಾ. ಸುಮನ್ ಹೆಗಡೆ, ಶಿರಸಿ ಇಂಡಿಯನ್ ಮೆಡಿಕಲ್ ಅಸೋಸಿಯೇಷನ್ ಅಧ್ಯಕ್ಷರಾದ ರೊ। ಡಾ. ಕೃಷ್ಣಮೂರ್ತಿ ಹೆಗಡೆ, ಶಿರಸಿ ಸ್ಕ್ಯಾನಿಂಗ್ ಸೆಂಟರ್ ನಿರ್ದೇಶಕರು ರೊ। ಡಾ. ದಿನೇಶ್ ಹೆಗಡೆ, ಶಿರಸಿ ರೋಟರಿ ಕ್ಲಬ್ ಛೇರ್‌ಮನ್ ರೊ. ಮಹೇಶ್ ತೆಲಂಗ, ಶಿರಸಿ ರೋಟರಿ ಕ್ಲಬ್ ಕಾರ್ಯದರ್ಶಿ ರೊ। ಸರಸ್ವತಿ ಎನ್. ರವಿ, ಸಮೃದ್ಧಿ ಕ್ರೆಡಿಟ್ ಕೋಆಪರೇಟಿವ್ ಸೊಸೈಟಿಯ ಉಪಾಧ್ಯಕ್ಷರು ಮತ್ತು ನಿರ್ದೇಶಕರು ನಾರಾಯಣ ಆರ್ ಕೋಮಾರ್ ಮತ್ತು ನಗರ ಯೋಜನ ಪ್ರಾಧಿಕಾರ ಅಧ್ಯಕ್ಷರಾದ ಜಗದೀಶ್ ಗೌಡ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಉತ್ತರಕನ್ನಡ ಜಿಲ್ಲೆಯ ಕ್ಷೇತ್ರ ಸಂಯೋಜಕರಾದ ಶ್ರೀ ಸುಧಾಕರ ಪೂಜಾರಿ ಸ್ವಾಗತಿಸಿ, ಹಿರಿಯ ಪ್ರಬಂಧಕರಾದ ಶ್ರೀ ಚರಣ್ ಕುಮಾರ್ ಎಂ. ಕಾರ್ಯಕ್ರಮವನ್ನು ನಿರೂಪಿಸಿ, ಫಂಡ್‌ರೈಸಿಂಗ್ ಮತ್ತು ಮಾರ್ಕೆಟಿಂಗ್ ಮ್ಯಾನೇಜರ್ ಶ್ರೀ ಆಶ್ರಿತ್ ಸಿ.ಪಿ. ಧನ್ಯವಾದವಿತ್ತರು. ಒಟ್ಟು 17 ಮಂದಿ ಶಿಬಿರಾರ್ಥಿಗಳು ಶಿಬಿರದಲ್ಲಿ ಪಾಲ್ಗೊಂಡಿದ್ದರು.

## ನಾವಳೆಯಲ್ಲಿ ಸಂಪನ್ನಗೊಂಡ ಉಚಿತ ಟೈಲರಿಂಗ್ ತರಬೇತಿ ಶಿಬಿರ



**ನಾವಳೆ (ಪೆ. 22 ):** ಸೇವಾಭಾರತಿ (ರಿ.), ಕನ್ಯಾಡಿ ಇದರ ನೇತೃತ್ವದಲ್ಲಿ ಸಬಲಿನಿ ಯೋಜನೆಯಡಿ ಶೌರ್ಯ ವಿಪತ್ತು ನಿರ್ವಹಣಾ ಘಟಕ ಅರಸಿನಮಕ್ಕಿ– ಶಿಶಿಲ ಇದರ ಸಹಭಾಗಿತ್ವದಲ್ಲಿ ಮಹಿಳೆಯರಿಗಾಗಿ 30ನೇ ಉಚಿತ ಟೈಲರಿಂಗ್ ತರಬೇತಿ ಶಿಬಿರದ ಸಮಾರೋಪ ಸಮಾರಂಭವು ಫೆಬ್ರವರಿ 22 ರಂದು ಹತ್ಯಡ್ಕ ಗ್ರಾಮದ ಅಂಗನವಾಡಿ ಕೇಂದ್ರ ನಾವಳೆ– ಪಾಲೆಂಜದಲ್ಲಿ ನಡೆಯಿತು.

ಅರಿಕೆಗುಡ್ಡೆ ಶ್ರೀ ವನದುರ್ಗ ದೇವಸ್ಥಾನದ ಜೀರ್ಣೋದ್ಧಾರ ಸಮಿತಿಯ ಅಧ್ಯಕ್ಷರು ಶ್ರೀ ಪ್ರಕಾಶ್ ಪಿಲಿಕಬೆ ಒಂದು ತಿಂಗಳ ಉಚಿತ ಹೊಲಿಗೆ ತರಬೇತಿಯನ್ನು ಪಡೆದುಕೊಂಡು ಸ್ವಾವಲಂಬಿ ಜೀವನವನ್ನು ನಡೆಸಿ ಸಮಾಜದಲ್ಲಿ ಉತ್ತಮ ರೀತಿಯಲ್ಲಿ ನಮ್ಮನ್ನು ನಾವು ತೊಡಗಿಸಿಕೊಳ್ಳಬಹುದು ಎಂದು ಶುಭಹಾರೈಸಿದರು.

ಕಾರ್ಯಕ್ರಮದಲ್ಲಿ ಸೇವಾಭಾರತಿ ಕನ್ಯಾಡಿಯ ಅಧ್ಯಕ್ಷೆ ಹಾಗೂ ಬೆಳ್ತಂಗಡಿ ತಾಲೂಕು ಮಹಿಳಾ ಸಹಕಾರಿ ಸಂಘ ಇದರ ಸಿಇಒ ಶ್ರೀಮತಿ ಸ್ವರ್ಣಗೌರಿ ಟೈಲರಿಂಗ್ ಶಿಬಿರಾರ್ಥಿಗಳಿಗೆ ಶುಭಹಾರೈಸಿ, ಮಹಿಳೆಯರಿಗೆ ಯಾವುದಾದರೂ ಒಂದು ಸ್ವಉದ್ಯೋಗ ಇದ್ದರೆ ಇಡೀ ಜಗತ್ತಿನಲ್ಲೇ ಸಾಧನೆಯನ್ನು ಮಾಡಬಹುದು, ಇನ್ನು ಸ್ವಉದ್ಯೋಗವನ್ನು ಕಲಿತು ಎತ್ತರಕ್ಕೆ ಬೆಳೆಯಿರಿ ಎಂದು ಅಧ್ಯಕ್ಷೀಯ ಮಾತುಗಳನ್ನಾಡಿದರು.

ಕಾರ್ಯಕ್ರಮದಲ್ಲಿ ಟೈಲರಿಂಗ್ ತರಬೇತುದಾರರಾದ ಶ್ರೀಮತಿ ವಿಮಲಾ ಅರ್. ಶೆಟ್ಟಿ ಮಾತನಾಡಿ ನಾನು ಕಲಿತಂತಹ ವಿದ್ಯೆ ಇನ್ನೊಬ್ಬರಿಗೆ ದಾರಿದೀಪವಾಗಬೇಕು ಎಂದು ಎಲ್ಲಾ ಶಿಬಿರಾರ್ಥಿಗಳಿಗೆ ಶುಭಹಾರೈಸಿ ಸಂತಸ ವ್ಯಕ್ತಪಡಿಸಿದರು.

ನಮ್ಮ ಸಂಸ್ಥೆಯ ಪರವಾಗಿ ಶ್ರೀಮತಿ ವಿಮಲಾ ಆರ್ ಶೆಟ್ಟಿಯವರನ್ನು ಸನ್ಮಾನಿಸಿ ಗೌರವಿಸಲಾಯಿತು. ಶಿಬಿರಾರ್ಥಿಗಳು ತಮ್ಮ ಅನಿಸಿಕೆಯನ್ನು ಹಂಚಿಕೊಂಡು, ಶಿಬಿರಾರ್ಥಿಗಳಿಗೆ ಪ್ರಮಾಣಪತ್ರವನ್ನು ವಿತರಿಸಲಾಯಿತು.

ಅರಸಿನಮಕ್ಕಿ ಗ್ರಾಮ ಪಂಚಾಯತ್ ಉಪಾಧ್ಯಕ್ಷರಾದ ಶ್ರೀ ಸುಧೀರ್ ಕುಮಾರ್, ಅರಿಕೆಗುಡ್ಡೆ ಶ್ರೀ ವನದುರ್ಗ ದೇವಸ್ಥಾನದ ಮಹಿಳಾ ಕಾರ್ಯದರ್ಶಿ ಶ್ರೀಮತಿ ನೀತಾ ರಾಧೇಶ್ ಆಚಾರ್ಯ ಮತ್ತು ಅರಸಿನಮಕ್ಕಿ ಆಶಾ ಕಾರ್ಯಕರ್ತೆ ಶ್ರೀಮತಿ ಕವಿತಾ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಒಟ್ಟು 23 ಮಂದಿ ಶಿಬಿರಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಟೈಲರಿಂಗ್ ಶಿಬಿರಾರ್ಥಿ ಶ್ರೀಮತಿ ದಿವ್ಯಜ್ಯೋತಿ ಸ್ವಾಗತಿಸಿ, ಡಾಕ್ಯುಮೆಂಟೇಶನ್, ಮಾನಿಟರಿಂಗ್ ಮತ್ತು ಇವಲ್ಯೂವೇಟಿಂಗ್ ಕೋಆರ್ಡಿನೇಟರ್ ಕು. ಸುಮ ಕಾರ್ಯಕ್ರಮ ನಿರೂಪಿಸಿ, ಟೈಲರಿಂಗ್ ಶಿಬಿರಾರ್ಥಿ ಶ್ರೀಮತಿ ಕವಿತಾ ಧನ್ಯವಾದವಿತ್ತರು.

## ಸೇವಾ ಸಂಗಮ ಆನ್‌ಲೈನ್ ಕಾರ್ಯಗಾರ

(ಬೆನ್ನುಹುರಿ ಅಪಘಾತಕ್ಕೊಳಗಾದವರಿಗಾಗಿ ಆನ್ಲೈನ್ ಕಾರ್ಯಾಗಾರ-31 )

**ಗಾಲಿಕುರ್ಚಿ ಕೌಶಲ್ಯ**

**ಸಂಪನ್ಮೂಲ ವ್ಯಕ್ತಿ**




**ಶ್ರೀ ಅಂತೋಣಿ ಡಿಸೋಜ**

ಪೀರ್ ಟ್ರೈನರ್, ಬೆನ್ನುಹುರಿ ಅಪಘಾತಕ್ಕೊಳಗಾದ ದಿವ್ಯಾಂಗರ ಪುನಶ್ಚೇತನ ಕೇಂದ್ರ, ಸೌತಡ್ಕ

ದಿನಾಂಕ : 28/02/2025 Live On : Google Meet

ಸಮಯ : 4pm to 5pm https://meet.google.com/yge-qhkc-xpw

ಸೇವಾಭಾರತಿ ಕನ್ಯಾಡಿ -II
9945491241
www.sevaabharathi.org




ಫೆಬ್ರವರಿ ತಿಂಗಳ ಸೇವಾಸಂಗಮ ಆನ್‌ಲೈನ್ ಮಾಹಿತಿ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಶ್ರೀ ಅಂತೋಣಿ ಡಿಸೋಜ ಸೌತಡ್ಕದ ಬೆನ್ನುಹುರಿ ಅಪಘಾತಕ್ಕೊಳಗಾದ ದಿವ್ಯಾಂಗರ ಪುನಶ್ಚೇತನ ಕೇಂದ್ರದ ಪೀರ್ ಟ್ರೈನರ್, ಬೆನ್ನುಹುರಿ ಅಪಘಾತಕ್ಕೊಳಗಾದ ದಿವ್ಯಾಂಗರಿಗಾಗಿ ಗಾಲಿಕುರ್ಚಿ ಕೌಶಲ್ಯದ ಬಗ್ಗೆ ಮಾಹಿತಿ ಇತ್ತರು. ಕಾರ್ಯಗಾರದಲ್ಲಿ ಒಟ್ಟು 52 ಮಂದಿ ಭಾಗವಹಿಸಿದ್ದರು.


## APD ಯ ಸಹಕಾರದೊಂದಿಗೆ ರಿಯಾಯಿತಿ ದರದಲ್ಲಿ ಗಾಲಿಕುರ್ಚಿ ವಿತರಣೆ



ಶ್ರೀ ಬಿ.ಹೆಚ್. ಮಹಮದ್ ಮನ್ಸೂರ್, ಬ್ರಹ್ಮಾವರ



ಶ್ರೀ ರಮೇಶ್ ಪ್ರಭು, ಬೆಳ್ಳಾರೆ



ಶ್ರೀ ಮಜಿದ, ಬೈಂದೂರು

### ಜನವರಿ ತಿಂಗಳ ಸೇವಾ ಕಾರ್ಯಗಳು

1. ಗಾಲಿಕುರ್ಚಿ – 3
2. ನೀರಿನ ಹಾಸಿಗೆ – 1
3. ಗಾಳಿಯ ಹಾಸಿಗೆ – 1
4. ಸೆಲ್ಫ್‌ಕೇರ್ ಕಿಟ್ ಮತ್ತು ಮೆಡಿಕಲ್ ಕಿಟ್ – 19
5. ವಾಕರ್ – 1

## ಉಚಿತವಾಗಿ ವಾಕರ್ ವಿತರಣೆ



ಶ್ರೀ ಮಾಲತೇಶ್ ಲತೂರಿ, ಬನವಾಸಿ

## ಸೇವಾಧಾಮ ಕಟ್ಟಡದ ನಿರ್ಮಾಣದ ಕಾರ್ಯ ಪ್ರಗತಿಯಲ್ಲಿ






# ತಮ್ಮ ವಿಶೇಷ ದಿನವನ್ನು ವಿಶಿಷ್ಟ ರೀತಿಯಲ್ಲಿ ಆಚರಿಸಿ ಮಾದರಿಯಾದವರು



ಸೇವಾಧಾಮದಲ್ಲಿ ಪುನಶ್ಚೇತನ ಪಡೆಯುತ್ತಿರುವ ದಿವ್ಯಾಂಗರಿಗೆ ಒಂದು ಹೊತ್ತಿನ ಊಟಕ್ಕಾಗಿ ದೇಣಿಗೆಯನ್ನು ನೀಡುವ ಮೂಲಕ ತಮ್ಮ ವಿಶೇಷ ದಿನವನ್ನು ಆಚರಿಸಿ ಎಲ್ಲರಿಗೂ ಮಾದರಿಯಾಗಿದ್ದೀರಿ. ತಮ್ಮ ಈ ಸೇವಾಕಾರ್ಯಕ್ಕೆ ಕೃತಜ್ಞತೆಗಳು...





ಶ್ರೀ ಚರಣ್‌ಕುಮಾರ್ ಎಂ.,
ಪುತ್ತೂರು



ಕು. ಪ್ರಣಮ್ಯ ಕುಮಾರಿ
ಉಜಿರೆ



ಶ್ರೀ ಶೆಲ್ಡನ್ ಮೋನಿಸ್
ಮದ್ದಡ್ಕ



ಶ್ರೀ ಸುಜಿತ್ ಭಿಡೆ
ಮುಂಡಾಜೆ



ಶ್ರೀ ಸುನಿಲ್ ಕುಮಾರ್ ಜೈನ್
ದೊಂಡೋಲೆ



ಡಾ. ಗೋಪಾಲಕೃಷ್ಣ ಭಟ್,
ಡಾ. ಭಾರತಿ, ಉಜಿರೆ



ಕು. ಭವ್ಯಶ್ರೀ ಜಿ.ಕೆ.
ಸಂಪಾಜೆ

## ಸೇವಾಧಾಮ ಪುನಶ್ಚೇತನ ಕೇಂದ್ರದಲ್ಲಿ 3 ತಿಂಗಳ ಪುನಶ್ಚೇತನವನ್ನು ಪಡೆದುಕೊಂಡು ಫೆಬ್ರವರಿ ತಿಂಗಳಲ್ಲಿ ಡಿಸ್ಚಾರ್ಜ್ ಆದವರು





ಶ್ರೀ ಮಹಾಬಲೇಶ್ವರ, ಸಿದ್ದಾಪುರ

## ಸೇವಾಧಾಮದಲ್ಲಿ ಪುನಶ್ಚೇತನಗೊಂಡ ಸನಿವಾಸಿಗಳ ಅನಿಸಿಕೆ

ಶ್ರೀಮತಿ ನೇತ್ರಾವತಿ ಎಸ್. ಆದ ನಾನು ಸೇವಾಭಾರತಿ ಸಂಸ್ಥೆಗೆ ದಿನಾಂಕ 02–09–2024 ರಂದು ದಾಖಲಾಗಿರುತ್ತೇನೆ. ಇಲ್ಲಿನ ವಾತಾವರಣವು ಬಹಳ ಚೆನ್ನಾಗಿದೆ. ನನಗೆ 04–09–2024 ರಂದು ಥೆರಪಿ ಆರಂಭಿಸಿದರು. ನನಗೆ ಆ ಸಮಯದಲ್ಲಿ ಬಹಳ ಕಷ್ಟವಾಗುತ್ತಿತ್ತು ಬಲಗೈಯಲ್ಲಿ ಶಕ್ತಿಯೇ ಇಲ್ಲವಾಗಿತ್ತು. ಬರಬರುತ್ತಾ ಸ್ವಲ್ಪ ಸುಧಾರಣೆ–ಯಾಯಿತು. ಬೆಳಗ್ಗಿನ ಯೋಗಾಸನ ನನ್ನ ಆರೋಗ್ಯ ಸುಧಾರಿಸುವಲ್ಲಿ ಪೂರಕವಾಗಿದೆ. ಯೋಗಾಸನ ಕಷ್ಟವಾದರೂ ಇಷ್ಟವೇ ಇಲ್ಲಿಯ ಸಿಬ್ಬಂದಿಗಳು ಮನಮುಟ್ಟುವಂತೆ ಥೆರಪಿ ನೀಡುತ್ತಿದ್ದಾರೆ. ಆದರೆ ನನಗೆ ಸ್ವಲ್ಪ ಕಷ್ಟವಾಗು–ವಂತಿತ್ತು. ಈ ಸಂಸ್ಥೆಯ ಊಟ ಉಪಹಾರಗಳು ಬಹಳ ಚೆನ್ನಾಗಿದೆ. ಈ ಸಂಸ್ಥೆಯ ಸಿಬ್ಬಂದಿಗಳು ಹಾಗೂ ಸಂಸ್ಥೆಗೆ ನಾನು ಚಿರಋಣಿಯಾಗಿದ್ದೇನೆ. ನನ್ನಂತಹ ಅನೇಕ ಜನರ ಬಾಳಿಗೆ ಈ ಸಂಸ್ಥೆಯು ಬೆಳಕಾಗಿದೆ. ಆಂಟೋನಿ ಎಸ್. ತುಂಬಾ ಚೆನ್ನಾಗಿ ವೀಲ್‌ಚೇರ್ ಕಳಿಸಿಕೊಟ್ಟಿದ್ದಾರೆ. ಈ ಸಂಸ್ಥೆಯು ಮುಂದೆ ಉತ್ತರೋತ್ತರ ಅಭಿವೃದ್ಧಿ, ಯಶಸ್ಸು ಹಾಗೂ ಕೀರ್ತಿಗಳಿಸು–ವಂತಾಗಲಿ ಎಂದು ಆಶಿಸುತ್ತೇನೆ. ಎಲ್ಲರಿಗೂ ಶುಭವಾಗಲಿ ಒಳಿತಾಗಲಿ ಎಂಬ ಆಶಯದೊಂದಿಗೆ ನನ್ನ ಅನಿಸಿಕೆಯನ್ನು ಕೊನೆಗೊಳಿಸುತ್ತಿದ್ದೇನೆ.

ಇತಿ ನಿಮ್ಮ ವಿಶ್ವಾಸಿ, **ನೇತ್ರಾವತಿ ಎಸ್.**

## ನಿಮಗಿದು ತಿಳಿದಿರಲಿ

### ಇಂದ್ರಿಯಗಳು ಮತ್ತು ಗ್ರಹಿಕೆ

1. **ಬೆರಳಚ್ಚುಗಳು:** ಯಾವುದೇ ಇಬ್ಬರು ವ್ಯಕ್ತಿಗಳು ಒಂದೇ ರೀತಿಯ ಬೆರಳಚ್ಚುಗಳನ್ನು ಹೊಂದಿರುವುದಿಲ್ಲ, ಒಂದೇ ರೀತಿಯ ಅವಳಿಗಳೂ ಸಹ.
2. **ಟಂಗ್‌ಪ್ರಿಂಟ್:** ಫಿಂಗರ್ ಪ್ರಿಂಟ್‌ಗಳಂತೆಯೇ, ಪ್ರತಿಯೊಬ್ಬ ವ್ಯಕ್ತಿಯ ನಾಲಿಗೆಯ ಮುದ್ರಣವು ವಿಶಿಷ್ಟವಾಗಿದೆ.
3. **ಹೃದಯ ಬಡಿತಗಳು:** ಮಾನವನ ಹೃದಯವು ಜೀವಿತಾವಧಿಯಲ್ಲಿ ಸುಮಾರು 3 ಬಿಲಿಯನ್ ಬಾರಿ ಬಡಿಯುತ್ತದೆ

## ನಮ್ಮ ಯೋಜನೆಗಳು

**ಆರೋಗ್ಯಮ್ :** ರಕ್ತದಾನ ಶಿಬಿರಗಳ ಆಯೋಜನೆ ಮತ್ತು ಆ್ಯಂಬುಲೆನ್ಸ್ ಸೇವೆಗಳು.

**ಸಬಲಿನಿ :** ಮಹಿಳಾ ಸ್ವಾವಲಂಬನಕ್ಕಾಗಿ ವೃತ್ತಿ ತರಬೇತಿ.

**ಸೇವಾಧಾಮ :** ಬೆನ್ನುಹುರಿ ಅಪಘಾತಗೊಂಡವರಿಗಾಗಿ ಪುನಶ್ಚೇತನ ಕೇಂದ್ರ.

**ಸೇವಾಪಥ :** ಮಾಸಿಕ ಈ–ನ್ಯೂಸ್ ಲೆಟರ್ .

**ಸೇವಾ ಸಂಗಮ :** ಬೆನ್ನುಹುರಿ ಅಪಘಾತಗೊಂಡವರಿಗಾಗಿ ಆನ್‌ಲೈನ್ ಮೂಲಕ ಸಂಬಂಧಿತ ತಜ್ಞರಿಂದ ಮಾಹಿತಿ, ತರಬೇತಿ ಹಾಗೂ ಮಾರ್ಗದರ್ಶನ.

**ಆರೋಗ್ಯ ಬಿಂದು:** ಫಲಾನುಭವಿಗಳಿಗೆ ಕನಿಷ್ಠ ದರದಲ್ಲಿ ಸೆಲ್ಫ್‌ಕೇರ್ & ಮೆಡಿಕಲ್ ಕಿಟ್‌ಗಳು

### ತಾವು ಹೀಗೂ ನಮ್ಮ ಸಂಸ್ಥೆಯೊಂದಿಗೆ ಕೈಜೋಡಿಸಬಹುದಾಗಿದೆ

### ಸಂಸ್ಥೆಗೆ ದೇಣಿಗೆ ಮೂಲಕ ಸಹಕಾರ

| | |
|---|---|
| ರೂ. 2000/– | ನೀಡುವುದರ ಮೂಲಕ ಒಟ್ಟು ಫಲಾನುಭವಿಯ ಒಂದು ತಿಂಗಳ ಮೆಡಿಕಲ್ ಕಿಟ್‌ಗಳಿಗಾಗಿ ಸಹಕಾರ. |
| ರೂ. 6000/– | ನೀಡುವುದರ ಮೂಲಕ ಒಬ್ಬ ಫಲಾನುಭವಿಯ ಒಂದು ತಿಂಗಳ ಪುನಶ್ಚೇತನ ಚಿಕಿತ್ಸೆಗಾಗಿ ಸಹಕಾರ |
| ರೂ. 4500/– | ನೀಡುವುದರ ಮೂಲಕ ಫಲಾನುಭವಿಯ ಒಂದು ತಿಂಗಳ ಪುನಶ್ಚೇತನ ಚಿಕಿತ್ಸೆಯ ಸಂದರ್ಭ ಪೋಷಕರಿಗಾಗಿ ಸಹಕಾರ |
| ರೂ. 3000/– | ನೀಡುವುದರ ಮೂಲಕ ಸೇವಾಧಾಮದಲ್ಲಿ ಒಂದು ಹೊತ್ತಿನ ಊಟೋಪಚಾರಕ್ಕೆ ಸಹಕಾರ |
| ರೂ. 10000/– | ನೀಡುವುದರ ಮೂಲಕ ಸಮುದಾಯ ಭೇಟಿಗಾಗಿ ಸಹಕಾರ |
| ರೂ. 15000/– | ನೀಡುವುದರ ಮೂಲಕ ಒಬ್ಬ ಫಲಾನುಭವಿಗಳಿಗೆ ಒಂದು ಗಾಲಿಕುರ್ಚಿಯ ಕೊಡುಗೆ |
| ರೂ. 10000/– | ನೀಡುವುದರ ಮೂಲಕ ಕೇಂದ್ರದಲ್ಲಿ ಹುಟ್ಟು ಹಬ್ಬದ ಆಚರಣೆ ಮಾಡುವುದು |

### DONATE & JOIN US IN OUR MISSION

A/c Holder - M/s. Sevabharathi(R)
A/c No - 01682200072637
IFS Code - CNRB0010168
Bank - Canara Bank, Kokkada Branch

### Support us for constructions of Rehabilitation Centre

A/c Name : Sevabharathi
A/c No : 139322010000383
IFSC : UBIN0913936
Account Type : Savings Account
Union Bank of India, UJIRE Branch

*We are put in situations to build our character... not destroy us*

# ಆಶಯ ಕಳೆದುಕೊಂಡವರ ಬಾಳುಬೆಳಗಿದ ಐ.ಟಿ.ಕಂಪನಿ, ಅಂಚಿನಡ್ಕ ಆದಿತ್ಯ ಕಲ್ಲುರಾಯ ಅವರ ಜೀವನೋದ್ಯಮ ಯಶೋಗಾಥೆ



ಆದಿತ್ಯ ಕಲ್ಲುರಾಯ ಇವರು ಮೂಲತಃ ಸುಳ್ಯ ತಾಲೂಕಿನ ಕಾವು, ಅಂಚಿನಡ್ಕ ನಿವಾಸಿ, 1990 ರಲ್ಲಿ ನವೆಂಬರ್ 12 ರಂದು ತೃತೀಯ ಪುತ್ರನಾಗಿ ಶ್ರೀ ರವಿಶಂಕರ ಕಲ್ಲುರಾಯ ಮತ್ತು ಶ್ರೀಮತಿ ಲಲಿತಾ ಕಲ್ಲುರಾಯ ದಂಪತಿಯ ಪುತ್ರರಾಗಿ ಜನಿಸಿದರು. ಪುತ್ತೂರಿನ ಸೈಂಟ್ ವಿಕ್ಟರ್ಸ್ ಪ್ರೈಮರಿ ಶಾಲೆಯಲ್ಲಿ ಪ್ರಾಥಮಿಕ ಶಿಕ್ಷಣ ತದನಂತರ ಪ್ರೌಢಶಿಕ್ಷಣವನ್ನು ಮತ್ತು ಪಿಯುಸಿ ಶಿಕ್ಷಣವನ್ನು ಪುತ್ತೂರಿನ ಸೈಂಟ್ ಫಿಲೋಮಿನಾದಲ್ಲಿ ಪೂರ್ಣಗೊಳಿಸಿದರು. ನಂತರದ ವಿದ್ಯಾಭ್ಯಾಸವನ್ನು ಮಾಡಲು ವಿವೇಕಾನಂದ ಕಾಲೇಜಿನಲ್ಲಿ ಇಂಜಿನಿಯರಿಂಗ್ ಬಗ್ಗೆ ಸೇರಿಕೊಂಡರು. 2012ರಲ್ಲಿ ಫೈನಲ್ ಇಯರ್ ಸಮಯದಲ್ಲಿ ಮೇ 19 ರಂದು ಮಧ್ಯಾಹ್ನದ ವೇಳೆ ಬೈಕಿನಲ್ಲಿ ಕಾಲೇಜಿಗೆ ತೆರಳುವ ಸಂದರ್ಭದಲ್ಲಿ ರೋಡ್ ಕನ್‌ಸ್ಟ್ರಕ್ಷನ್ ಮಾಡುವಾಗ ಯಾವುದೇ ಮುನ್ಸೂಚನೆ ಇಲ್ಲದೆ ಮರವನ್ನು ಕಡಿಯುತ್ತಿದ್ದರು. ಈ ವೇಳೆ ಮಾವಿನಮರವನ್ನು ನೆಲಕ್ಕೆ ಉರುಳಿಸುವಾಗ ಆಕಸ್ಮಿಕವಾಗಿ ಮರದ ಅಡಿಗೆ ಸಿಲುಕಿ ಅಪಘಾತಕ್ಕೆ ಒಳಗಾದರು. ವಿಧಿಯ ಆಟ ಬೇರೆಯೇ ಆಗಿತ್ತು. ಯಾರದ್ದೋ ತಪ್ಪಿಗೆ ಯಾರೋ ಸಿಕ್ಕಿಹಾಕಿ–ಕೊಳ್ಳುವುದು ಇದುವೆ ವಿಧಿಯ ಆಟ ಎಂದರೂ ತಪ್ಪಾಗಲಾರದು. ತದನಂತರ ಪ್ರಾಥಮಿಕ ಚಿಕಿತ್ಸೆಯನ್ನು ಪುತ್ತೂರಿನ ಸಿಟಿ ಆಸ್ಪತ್ರೆಯಲ್ಲಿ ಪಡೆದುಕೊಂಡರು. ಮುಂದಿನ ಹೆಚ್ಚಿನ ಚಿಕಿತ್ಸೆಗಾಗಿ ಮಂಗಳೂರಿನ ತೇಜಸ್ವಿನಿ ಆಸ್ಪತ್ರೆಗೆ ಬಂದರು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ಸಂದರ್ಭದಲ್ಲಿ ಅವರಿಗೆ ಬೆನ್ನುಹುರಿ ಅಪಘಾತದ ಬಗ್ಗೆ ವಿಷಯ ತಿಳಿಸಿದರು. ಇನ್ನು ಮುಂದೆ ನಡೆದಾಡಲು ಸಾಧ್ಯವಿಲ್ಲ ಹಾಗೂ ಗಾಲಿಕುರ್ಚಿಯ ಮುಖಾಂತರ ಮಾತ್ರ ಚಲಿಸಲು ಸಾಧ್ಯವೆಂದು ಮನವರಿಕೆ ಮಾಡಿದರು. 40 ದಿನಗಳ ಕಾಲ ಆಸ್ಪತ್ರೆಯಲ್ಲಿಯೇ ಇದ್ದು ಚಿಕಿತ್ಸೆಯನ್ನು ಪಡೆದು–ಕೊಂಡರು.

ಚಿಕಿತ್ಸೆಯನ್ನು ಪಡೆದ ನಂತರ ನವಂಬರ್ ತಿಂಗಳಲ್ಲಿ ಪುನಶ್ಚೇತನವನ್ನು ಪಡೆದುಕೊಳ್ಳಲು ವೆಲ್ಲೂರಿಗೆ ಹೋದರು. ಅಲ್ಲಿ ಗಾಲಿಕುರ್ಚಿಯಲ್ಲಿ ಕುಳಿತುಕೊಳ್ಳಲು ಮತ್ತು ಕ್ಯಾಲಿಪರ್ ಹಾಕಿ ವಾಕರಲ್ಲಿ ನಡೆದಾಡಲು ಕಲಿತುಕೊಂಡರು ಸ್ವಲ್ಪಮಟ್ಟಿಗೆ ಸುಧಾರಣೆಯಾಗಿ ನಂತರ ಪುತ್ತೂರಿನಲ್ಲಿ ಪಂಚಕರ್ಮ ಆಯುರ್ವೇದ ಚಿಕಿತ್ಸೆಯನ್ನು ಪ್ರಾರಂಭಿಸಿ ಸುಧಾರಿಸಿಕೊಂಡರು.

ಬೆನ್ನುಹುರಿ ಅಪಘಾತಕ್ಕೆ ಒಳಗಾಗಿದ್ದರೂ ಸಹ ಇನ್ನೊಬ್ಬರಿಗೆ ನಾನು ಭಾರವಾಗದೆ ಕೆಲಸವನ್ನು ಮಾಡುತ್ತ ನನ್ನ ಕಾಲಮೇಲೆ ನಾನೇ ನಿಂತುಕೊಳ್ಳಬಲ್ಲೆ ಎಂಬ ಧೈರ್ಯವನ್ನು ಮಾಡಿ ಅಪಘಾತಕ್ಕೊಳಗಾದ ಒಂದು ವರ್ಷದಲ್ಲಿಯೇ ಫೈನಲ್ ಇಯರ್ ಇಂಜಿನಿಯರಿಂಗ್ ಪರೀಕ್ಷೆ ಬರೆದು ಪಾಸ್ ಮಾಡಿದರು. ಹಾಸಿಗೆಯಲ್ಲೇ ಮಲಗಿಕೊಂಡು ಇದ್ದ ಸಮಯದಲ್ಲಿ ಆನ್‌ಲೈನ್ ಕೋರ್ಸ್‌ಗಳನ್ನು ಯೂಟ್ಯೂಬ್ ಮುಖಾಂತರ ನೋಡುತ್ತ ತಾವೇ ಸ್ವತಃ ಸಾಫ್ಟ್‌ವೇರ್ ಡೆವಲಪ್‌ಮೆಂಟ್ ಬಗ್ಗೆ ಕಲಿತುಕೊಂಡರು. ನಂತರ ಆನ್‌ಲೈನ್‌ನಲ್ಲಿ ಪ್ರಾಜೆಕ್ಟ್ ಮಾಡಲು ಪ್ರಾರಂಭಿಸಿದರು.

2017 ರಲ್ಲಿ ತನ್ನ ಗೆಳೆಯನಾದ ಶರತ್ ಜೊತೆ ಸೇರಿ "The Web People" ಕಂಪನಿಯನ್ನು ಪ್ರಾರಂಭಿಸಿದರು. ಈ 7 ವರ್ಷದಲ್ಲಿ ಸರಿಸುಮಾರು 200 ಕ್ಕೂ ಹೆಚ್ಚು ಕಂಪನಿಗಳಲ್ಲಿ ಕೆಲಸವನ್ನು ಮಾಡಿ ಇದೀಗ 30 ಜನಕ್ಕೆ ತಾವೇ ಸ್ವತಃ ಕೆಲಸವನ್ನು ನೀಡುತ್ತಾ ತನ್ನ ಜೀವನವನ್ನು ಸಾಗಿಸುತ್ತಾ ಎಲ್ಲರಿಗೂ ಮಾದರಿಯಾಗುವಂತೆ ಜೀವನವನ್ನು ವಿಜಯಪಥದ ಕಡೆಗೆ ಕೊಂಡೊಯ್ಯುತ್ತಿದ್ದಾರೆ.